ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
**Bangalore Development Authority**

ಬೆಂಅಪ್ರಾ/ನಯೋಸ/PRL-17/ 2509 /2024-25.

ಸಂಖ್ಯೆ :
No.

ದಿನಾಂಕ :
Date : 3/1/2025

# ಕಾರ್ಯಾದೇಶ

[ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17[2-A) ರಡಿಯಲ್ಲಿ]

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕುಂಬಳಗೋಡು ಗ್ರಾಮದ ಸರ್ವೆ ನಂ. 79/2, 79/3, 79/4(ಪಿ) ಮತ್ತು 79/5(ಪಿ) ರಲ್ಲಿ ಒಟ್ಟು 6ಎ-32ಗುಂಟೆ (ಒಟ್ಟು 0ಎ-23.25ಗುಂ ಖರಾಬು ಪಥ ಬದಲಾವಣೆಯ ನಂತರ ಹೊರತುಪಡಿಸಿ) ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17 (2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು ಅರ್ಜಿದಾರರಾದ Sri. Shravan Gupta ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ:
1. ಅರ್ಜಿದಾರರ ಮನವಿ ದಿನಾಂಕ 06.07.2024.
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 6.4.1/2024 ದಿನಾಂಕ 30.10.2024.
3. ಈ ಕಛೇರಿಯ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/PRL-17/2134/2024-25, ದಿನಾಂಕ 27.11.2024.
4. ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ/363/ಬಿಎಂಆರ್/2023(ಇ) ದಿನಾಂಕ 12.02.2024 ರಂತೆ ತಹಶೀಲ್ದಾರ್, ಬೆಂಗಳೂರು (ದಕ್ಷಿಣ) ತಾಲ್ಲೂಕು ರವರಿಗೆ ಬರೆದ ಪತ್ರ ಸಂಖ್ಯೆ: ಬೆಂಅಪ್ರಾ/ನಯೋಸ/ PRL-17/2134/2024-25, ದಿನಾಂಕ 27.11.2024.
5. ಕೆನರಾ ಬ್ಯಾಂಕ್ ಚಲನ್ ನಂ. GN24127330, ದಿನಾಂಕ 19.12.2024.
6. ಕಛೇರಿ ಜ್ಞಾಪನ ಪತ್ರ ಸಂಖ್ಯೆ: ಬೆಂಅಪ್ರಾ/ಆ/ಉಕಾ-1/ಸಿವಿ/925/2024-25 ದಿನಾಂಕ 06.12.2024.

******

ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕುಂಬಳಗೋಡು ಗ್ರಾಮದ ಸರ್ವೆ ನಂ. 79/2 ರಲ್ಲಿ 1ಎ-35ಗುಂ, ಸರ್ವೆ ನಂ. 79/3 ರಲ್ಲಿ 1ಎ-34ಗುಂ, ಸರ್ವೆ ನಂ. 79/4(P) ರಲ್ಲಿ 1ಎ-31.50ಗುಂ ಮತ್ತು ಸರ್ವೆ ನಂ. 79/5(P) ರಲ್ಲಿ 1ಎ-11.50ಗುಂ ಒಟ್ಟು 6ಎ-32ಗುಂಟೆ (ಒಟ್ಟು 0ಎ-23.25ಗುಂ ಖರಾಬು ಪಥ ಬದಲಾವಣೆಯ ನಂತರ ಹೊರತುಪಡಿಸಿ) ವಿಸ್ತೀರ್ಣದ ಜಮೀನುಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17 (2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು ಅನುಮೋದಿಸುವಂತೆ ಅರ್ಜಿದಾರರಾದ Sri. Shravan Gupta ರವರು ಉಲ್ಲೇಖ [1] ರ ದಿನಾಂಕ 26.02.2024 ರ ಅರ್ಜಿಯಲ್ಲಿ ಕೋರಿರುತ್ತಾರೆ.

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕುಂಬಳಗೋಡು ಗ್ರಾಮದ ಸರ್ವೆ ನಂ. 79/2, 79/3, ... ಮತ್ತು 79/5(ಪಿ) ರಲ್ಲಿ ಒಟ್ಟು 6ಎ-32ಗುಂಟೆ (ಒಟ್ಟು 0ಎ-23.25ಗುಂ ಖರಾಬು ಪಥ ಬದಲಾವಣೆ ... ಹೊರತುಪಡಿಸಿ) ವಿಸ್ತೀರ್ಣದ ಜಮೀನುಗಳಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು ಅರ್ಜಿದಾರರಾದ Shravan Gupta ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

ಸದರಿ ಪ್ರಸ್ತಾವನೆಯನ್ನು ಉಲ್ಲೇಖ [2] ರಂತೆ ದಿನಾಂಕ 30.10.2024 ರಂದು ನಡೆದ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ವಿಷಯ ಸಂಖ್ಯೆ 6.4.1/2024 ರಲ್ಲಿ ಮಂಡಿಸಿ ಚರ್ಚಿಸಲಾಗಿದ್ದು, ಚರ್ಚೆಯ ನಂತರ ಪ್ರಶ್ನಿತ ಜಮೀನುಗಳಲ್ಲಿನ ಹಳ್ಳದ ಖರಾಬು ಪಥ ಬದಲಾವಣೆ ಕುರಿತು ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ ರವರ ಆದೇಶದಲ್ಲಿನ ಷರತ್ತುಗಳ ಅನುಸಾರ ಪಥ ಬದಲಾವಣೆ ಆಗಿರುವ ಹಳ್ಳದ ಪಂಕ್ತೀಕರಣಕ್ಕೆ ವಲಯ ನಿಯಮಾವಳಿಗಳ ಅನುಸಾರ ಎರಡು ಬದಿಗಳಲ್ಲಿ ಕಾಯ್ದಿರಿಸಬೇಕಾಗಿರುವ ನಾಲಾಬಫರ್ ಅನ್ನು ಅರ್ಜಿದಾರರ ಜಮೀನುಗಳಲ್ಲಿಯೇ ಪೂರ್ಣವಾಗಿ ಕಾಯ್ದಿರಿಸಿ, ಕರಡು ವಸತಿ ವಿನ್ಯಾಸ ನಕ್ಷೆಯಲ್ಲಿ Public Utilities ಗಳಿಗಾಗಿ ಅಗತ್ಯ ಜಾಗವನ್ನು ಕಾಯ್ದಿರಿಸಿ, ಅನುಮೋದಿತ ಮಹಾಯೋಜನೆ RMP-2015 ರ ವಲಯ ನಿಯಮಾವಳಿಗಳಿಗೆ ಅನುಗುಣವಾಗಿ ವಸತಿ ವಿನ್ಯಾಸ ನಕ್ಷೆ ಸಲ್ಲಿಸಿದ ನಂತರ, ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕುಂಬಳಗೋಡು ಗ್ರಾಮದ ಸ.ನಂ.79/2 ರಲ್ಲಿ 1ಎ-35ಗುಂ, ಸ.ನಂ.79/3 ರಲ್ಲಿ 1ಎ-34ಗುಂ, ಸ.ನಂ.79/4(P) ರಲ್ಲಿ 1ಎ-31.50ಗುಂ ಮತ್ತು ಸ.ನಂ.79/5(P) ರಲ್ಲಿ 1ಎ-11.50ಗುಂ, ಒಟ್ಟು 6ಎ-32ಗುಂಟೆ (ಒಟ್ಟು 0ಎ-23.25ಗುಂ ಖರಾಬು ಪಥ ಬದಲಾವಣೆಯ ನಂತರ ಹೊರತುಪಡಿಸಿ) ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 (2-A) ರಡಿಯಲ್ಲಿ Demarcation & Development ಉದ್ದೇಶಕ್ಕೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು, ಅನುಮೋದಿಸಲು ತೀರ್ಮಾನಿಸಲಾಯಿತು. ಈ ಕುರಿತು ನಿಯಮಾನುಸಾರ ಮುಂದಿನ ಕ್ರಮವಹಿಸುವ ಅಧಿಕಾರವನ್ನು ಆಯುಕ್ತರಿಗೆ ಪ್ರತ್ಯಾಯೋಜಿಸಲು ನಿರ್ಣಯಿಸಲಾಯಿತು.

ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದನೆ ಸಂಬಂಧ ಪಾವತಿಸಬೇಕಾದ ವಿವಿಧ ಶುಲ್ಕಗಳ ಬಾಬ್ತು ಒಟ್ಟು ₹. 46,94,710/- [₹. ನಲವತ್ತಾರು ಲಕ್ಷದ ತೊಂಬತ್ತನಾಲ್ಕು ಸಾವಿರದ ಏಳು ನೂರ ಹತ್ತು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸಲು ಮತ್ತು ಪಥ ಬದಲಾವಣೆ ಆದೇಶವನ್ನು ಸಲ್ಲಿಸುವಂತೆ ಉಲ್ಲೇಖ [3] ರ ಈ ಕಛೇರಿ ಪತ್ರದಲ್ಲಿ ತಿಳಿಸಲಾಗಿತ್ತು. ಉಲ್ಲೇಖ [4] ರಂತೆ ಅರ್ಜಿದಾರರು ಪ್ರಾಧಿಕಾರದ ಕೆನರಾ ಬ್ಯಾಂಕ್ ಚಲನ್ ನಂ. GN24127330 ರ ಮೂಲಕ ದಿನಾಂಕ 19.12.2024 ರಂದು ಶುಲ್ಕ ಪಾವತಿಸಿ ಚಲನ್ ಪ್ರತಿಯನ್ನು ಸಲ್ಲಿಸಿರುತ್ತಾರೆ. ಅರ್ಜಿದಾರರು ಪಾವತಿಸಿರುವ ಮೊತ್ತವು ಪ್ರಾಧಿಕಾರದ ಖಾತೆಗೆ ಸಂದಾಯವಾಗಿರುವ ಬಗ್ಗೆ Pass Sheet ನಲ್ಲಿ ನಮೂದಾಗಿರುತ್ತದೆ.

ಉಲ್ಲೇಖ (5) ರಲ್ಲಿ ದಿನಾಂಕ 12.02.2024 ರ ಸುತ್ತೋಲೆಯಂತೆ ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರಿಗೆ ಪ್ರಸ್ತಾವನೆಯಲ್ಲಿನ ಸರ್ವೆ ನಂಬರ್ ಜಮೀನುಗಳಿಗೆ ಸಂಬಂಧಿಸಿದಂತೆ ಯಾವುದಾದರೂ ವ್ಯಾಜ್ಯ / ಪ್ರಕರಣ / ತಕರಾರುಗಳು ಇರುವ ಕುರಿತು 15 ದಿನಗಳೊಳಗಾಗಿ ಮಾಹಿತಿ ನೀಡಲು ಕೋರಲಾಗಿತ್ತು. ಆದರೆ ಸದರಿಯವರಿಂದ ಯಾವುದೇ ಮಾಹಿತಿ ಸ್ವೀಕೃತವಾಗದೇ ಇರುವುದರಿಂದ, ಯಾವುದೇ ವ್ಯಾಜ್ಯ / ಪ್ರಕರಣ / ತಕರಾರುಗಳು ಇಲ್ಲವೆಂದು ಭಾವಿಸಿ ಸುತ್ತೋಲೆಯಲ್ಲಿ ತಿಳಿಸಿರುವಂತೆ ಮುಂದುವರೆಸಲಾಗಿದೆ.

ವಿಷಯ:- **ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕುಂಬಳಗೋಡು ಗ್ರಾಮದ ಸರ್ವೆ ನಂ. 79/2, 79/3, 79/4(ಪಿ) ಮತ್ತು 79/5(ಪಿ) ರಲ್ಲಿ ಒಟ್ಟು 6ಎ-32ಗುಂಟೆ (ಒಟ್ಟು 0ಎ-23.25ಗುಂ ಖರಾಬು ಪಥ ಬದಲಾವಣೆಯ ನಂತರ ಹೊರತುಪಡಿಸಿ) ವಿಸ್ತೀರ್ಣದ ಜಮೀನುಗಳಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು ಅರ್ಜಿದಾರರಾದ Sri. Shravan Gupta ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.**

---

ಉಲ್ಲೇಖ (6) ರ ಕಛೇರಿ ಜ್ಞಾಪನಾ ಪತ್ರದಂತೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸ್ವತ್ತುಗಳ ನೊಂದಣಿಗಾಗಿ ಇ-ಖಾತಾ ಹಾಗೂ ಕಾವೇರಿ 2.0 ನ್ನು ಏಕೀಕರಣಗೊಳಿಸಿದ್ದು, ಪ್ರಾಧಿಕಾರದಿಂದ ಅನುಮೋದನೆಗೊಂಡ ಖಾಸಗಿ ಬಡಾವಣೆಗಳಲ್ಲಿನ ನಾಗರೀಕ ಸೌಲಭ್ಯ ನಿವೇಶನ, ರಸ್ತೆ ಮತ್ತು ಉದ್ಯಾನವನ ಇವುಗಳಿಗೆ ತಾತ್ಕಾಲಿಕ ಆಸ್ತಿ ಗುರುತಿನ ಸಂಖ್ಯೆ (PID) ಕಡ್ಡಾಯವಾಗಿರುತ್ತದೆ. ಹಾಗಾಗಿ ಮಾನ್ಯ ಆಯುಕ್ತರು ಅನುಮೋದಿಸಿರುವ ಕಾರ್ಯಾದೇಶದ ಪ್ರತಿ ಮತ್ತು ಅನುಮೋದನೆಗೊಂಡಿರುವ ಬಡಾವಣೆ ನಕ್ಷೆಯ ಪ್ರತಿಯನ್ನು ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರು ಮತ್ತು ಕಂದಾಯ ಅಧಿಕಾರಿಗಳಿಗೆ ನೀಡತಕ್ಕದ್ದು ಎಂದು ಆದೇಶಿಸಲಾಗಿರುತ್ತದೆ.

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕುಂಬಳಗೋಡು ಗ್ರಾಮದ ಸರ್ವೆ ನಂ. 79/2 ರಲ್ಲಿ 1ಎ-35ಗುಂ, ಸರ್ವೆ ನಂ. 79/3 ರಲ್ಲಿ 1ಎ-34ಗುಂ, ಸರ್ವೆ ನಂ. 79/4(P) ರಲ್ಲಿ 1ಎ-31.50ಗುಂ ಮತ್ತು ಸರ್ವೆ ನಂ. 79/5(P) ರಲ್ಲಿ 1ಎ-11.50ಗುಂ ಒಟ್ಟು 6ಎ-32ಗುಂಟೆ (ಒಟ್ಟು 0ಎ-23.25ಗುಂ ಖರಾಬು ಪಥ ಬದಲಾವಣೆಯ ನಂತರ ಹೊರತುಪಡಿಸಿ) ವಿಸ್ತೀರ್ಣದ ಜಮೀನುಗಳಿಗೆ ಅನುಗುಣವಾಗಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17(2-A) ರ ಅಡಿಯಲ್ಲಿ 'Demarcation & Development' ಉದ್ದೇಶಕ್ಕೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮೋದನೆ ನೀಡಲಾಗಿದೆ.

| | |
|---|---|
| 1. | ರೇರಾ ಅಧಿನಿಯಮ 2016 ಹಾಗೂ ಸಂಬಂಧಿತ ಅಧಿನಿಯಮಗಳು 2017 ರನ್ವಯ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ನೊಂದಣಿ ಮಾಡಿಸುವುದು. |
| 2. | ತಾತ್ಕಾಲಿಕ ಬಡಾವಣೆಯಲ್ಲಿನ ರಸ್ತೆ, ಉದ್ಯಾನವನ ಮತ್ತು ಪಬ್ಲಿಕ್ ಯುಟಿಲಿಟಿ ಪ್ರದೇಶಗಳನ್ನು ನೊಂದಾಯಿತ ಪರಿತ್ಯಾಜನಾ ಪತ್ರದ ಮುಖಾಂತರ ಪುಕ್ಕಟೆಯಾಗಿ ಪ್ರಾಧಿಕಾರಕ್ಕೆ ಹಸ್ತಾಂತರಿಸತಕ್ಕದ್ದು. |
| 3. | ಪ್ರಶ್ನಿತ ಜಮೀನುಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಾಗಲೀ / ಲೋಕಾಯುಕ್ತದಲ್ಲಾಗಲೀ ಯಾವುದೇ ವಿಚಾರಣಾ ಪ್ರಾಧಿಕಾರದಲ್ಲಾಗಲೀ ಪ್ರಕರಣ ದಾಖಲಾಗಿದ್ದಲ್ಲಿ ಅರ್ಜಿದಾರರೇ ಬಗೆಹರಿಸಿಕೊಳ್ಳತಕ್ಕದ್ದು. |
| 4. | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಪೂರ್ವಾನುಮೋದನೆ ಇಲ್ಲದೆ ನಿವೇಶನಗಳ ಅಳತೆ ಹಾಗೂ ನಿವೇಶನಗಳ ಒಟ್ಟು ಸಂಖ್ಯೆಯನ್ನು ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯಲ್ಲಿ ಬದಲಾಯಿಸತಕ್ಕದ್ದಲ್ಲ. |
| 5. | ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆ ಅನುಮೋದನೆ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು, ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆಗಳನ್ನು ಮಾಡುವಂತಿಲ್ಲ. |
| 6. | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿನ ಪ್ರತಿ ನಿವೇಶನಕ್ಕೂ ಕುಡಿಯುವ ನೀರು, ತ್ಯಾಜ್ಯ ನೀರು, ವಿಲೇವಾರಿಗಾಗಿ ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸತಕ್ಕದ್ದು ಹಾಗೂ ಉದ್ದೇಶಿತ ವಸತಿ ವಿನ್ಯಾಸದಲ್ಲಿ ಒಟ್ಟು ಕ್ಷೇತ್ರದಲ್ಲಿ ಬೀಳುವ ಮಳೆನೀರು ವ್ಯರ್ಥವಾಗಿ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ದಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ತೋರಿಸತಕ್ಕದ್ದು. |

| | |
|---|---|
| 7. | ಉದ್ಯಾನವನ ಮತ್ತು ಬಯಲುಜಾಗಗಳನ್ನು ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆ ಅನುಮೋದನೆ ನಕ್ಷೆ ಪ್ರಕಾರ ಶೇ.100 ರಷ್ಟು ನಿವೇಶನಗಳ ಬಿಡುಗಡೆ ಕೋರುವ ಮೊದಲು Chain link Fencing ಮಾಡಿ ಹಾಗೂ ಅಭಿವೃದ್ಧಿಪಡಿಸುವುದು. |
| 8. | ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯಲ್ಲಿ ತೋರಿಸಿರುವ ರಸ್ತೆ ಅಗಲವನ್ನು ಯಾವುದೇ ಕಾರಣಕ್ಕೂ ಕಡಿಮೆ ಮಾಡಬಾರದು. |
| 9. | ಬಫರ್ ಪ್ರದೇಶದಲ್ಲಿ ಗಿಡ-ಮರಗಳನ್ನು ಬೆಳಸತಕ್ಕದ್ದು |
| 10. | ಅರ್ಜಿದಾರರು ಉದ್ದೇಶಿರುವ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಥವಾ ಅನ್ಯ ಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ. |
| 11. | ಪ್ರಸ್ತಾವನೆಗೆ ಸಂಬಂಧಿಸಿದಂತೆ ಅರ್ಜಿದಾರರು ಸುಳ್ಳು ದಾಖಲೆ ಅಥವಾ ಇನ್ನಿತರೆ ಫೋರ್ಜರಿ ದಾಖಲಾತಿಗಳನ್ನು ನೀಡಿರುವುದು ರುಜುವಾತಾದಲ್ಲಿ ಈಗ ತಾತ್ಕಾಲಿಕ ಅನುಮೋದನೆ ನೀಡಿರುವ ವಸತಿ ವಿನ್ಯಾಸ ನಕ್ಷೆ ಅನುಮೋದನೆ ನಕ್ಷೆ ಅನುಮೋದನೆಯು ತನ್ನಿಂದತಾನೆ ರದ್ದಾಗುವುದೆಂದು ಭಾವಿಸತಕ್ಕದ್ದು. |
| 12. | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ತುಂಬುವುದರ ನಿರ್ಣಯಕ್ಕೆ ಅರ್ಜಿದಾರರು ಬದ್ಧರಾಗಿರುವುದು. |
| 13. | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿನ ವಸತಿ ಅಭಿವೃದ್ಧಿಗಳಿಂದ ಉತ್ಪಾದನೆಯಾಗುವ ಘನ ತ್ಯಾಜ್ಯಗಳನ್ನು, ಹಸಿತ್ಯಾಜ್ಯ, ಒಣತ್ಯಾಜ್ಯ, ಪ್ಲಾಸ್ಟಿಕ್ ಮತ್ತು ಇತ್ಯಾದಿಗಳಾಗಿ ವಿಂಗಡಿಸಲು ಹಾಗೂ Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು. |
| 14. | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿ ಎಲ್ಲಾ ರಸ್ತೆಗಳನ್ನು IRC Specification ಪ್ರಕಾರ ಅಭಿವೃದ್ಧಿ ಪಡಿಸತಕ್ಕದ್ದು, ಅದಕ್ಕೂ ಮುಂಚೆ ಅಂದಾಜುಪಟ್ಟಿಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಭಿಯಂತರ ವಿಭಾಗದಿಂದ ಅನುಮೋದಿಸಿಕೊಳ್ಳತಕ್ಕದ್ದು. ರಸ್ತೆ ಅಭಿವೃದ್ಧಿ ಪಡಿಸುವ ಸಮಯದಲ್ಲಿ ಅಭಿಯಂತರ ವಿಭಾಗದಿಂದ ಸ್ಥಳ ಪರಿಶೀಲನೆಗಾಗಿ ಮತ್ತು ಕಾಮಗಾರಿ ಪರಿಶೀಲನೆಗೆ ಅನುವು ಮಾಡಿಕೊಡತಕ್ಕದ್ದು. |
| 15. | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿನ ಪ್ರತಿ ನಿವೇಶನಕ್ಕೂ ಸೋಲಾರ್ ಲೈಟಿಂಗ್ ಮತ್ತು ಸೋಲಾರ್ ವಾಟರ್ ಹೀಟಿಂಗ್ ವ್ಯವಸ್ಥೆಯನ್ನು ಅಳವಡಿಸಕ್ಕದ್ದು. |
| 16. | ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17-2ಬಿ ರನ್ವಯ ವಿನ್ಯಾಸವನ್ನು ಪೂರ್ಣ ಪ್ರಮಾಣದಲ್ಲಿ ಅಭಿವೃದ್ಧಿ ಪಡಿಸಿದ ನಂತರ, ಸಕ್ಷಮ ಪ್ರಾಧಿಕಾರಗಳಿಂದ ಸಿವಿಲ್, ವಿದ್ಯುತ್, ಒಳಚರಂಡಿ ಮತ್ತು ನೀರು ಸರಬರಾಜು ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಕುರಿತು ಪ್ರಮಾಣ ಪತ್ರಗಳೊಂದಿಗೆ ಕೋರಿಕೆ ಸಲ್ಲಿಸಿದಲ್ಲಿ ಅಂತಿಮ ವಸತಿ ವಿನ್ಯಾಸವನ್ನು ಮತ್ತು ವಸತಿ ನಿವೇಶನಗಳನ್ನು ಬಿಡುಗಡೆಗೊಳಿಸಲಾಗುವುದು. |
| 17. | ವಸತಿ ನಿವೇಶನಗಳಲ್ಲಿ ಕಟ್ಟಡ ನಿರ್ಮಾಣ ಮಾಡುವ ಪೂರ್ವಭಾವಿಯಾಗಿ ಸಂಬಂಧ ಪಟ್ಟ ಸಕ್ಷಮ ಪ್ರಾಧಿಕಾರದಿಂದ ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯತಕ್ಕದ್ದು. |
| 18. | ಸಿವಿಲ್ ಕಾಮಗಾರಿ ಕೆಲಸಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಮೇಲ್ವಿಚಾರಣೆಯಲ್ಲಿ ಅರ್ಜಿದಾರರೇ ಕಾರ್ಯಗತ ಮಾಡತಕ್ಕದ್ದು. |

Housiey.com

| | |
|---|---|
| 19. | ಅಭಿವೃದ್ಧಿದಾರರು ಕೊಳಚೆ ನೀರನ್ನು ಬಯಲು ಜಾಗ/ ಖಾಲಿ ಜಾಗಗಳಿಗೆ ಬಿಡದೇ ಸಂಸ್ಕರಿಸಿ ಕುಡಿಯುವ ನೀರಿನ ಹೊರತಾಗಿ ಉಳಿದ ಬಳಕೆಗಾಗಿ ಬಳಸತಕ್ಕದು. |
| 20. | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿನ ಪ್ರತಿ ನಿವೇಶನಕ್ಕೆ ಗೃಹ ಬಳಕೆ, ಕುಡಿಯುವ ನೀರಿನ ಹಾಗೂ ಇತರೆ ಉಪಯೋಗದ ನೀರು ಸರಬರಾಜು ವ್ಯವಸ್ಥೆಗಾಗಿ ಪ್ರತ್ಯೇಕ ಕೊಳವೆಗಳನ್ನು ಅಳವಡಿಸತಕ್ಕದ್ದು. |
| 21. | ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶದಲ್ಲಿ ವಿವಿಧ ಜಾತಿಯ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು ಹಾಗೂ ಅದೇ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ದೇಶಗಳಿಗೆ ಬದಲಾಯಿಸಬಾರದು. |
| 22. | ಅನುಮೋದನೆ ಪಡೆಯುವ ಸಂಬಂಧ ತಪ್ಪು ಮಾಹಿತಿ / ದಾಖಲೆಗಳನ್ನು ಸಲ್ಲಿಸಿ, ಅನುಮೋದನೆ ಪಡೆದಿರುವುದು ದೃಢಪಟ್ಟಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 76(O) ರ ಅಡಿಯಲ್ಲಿ ಕ್ರಮವಹಿಸಲಾಗುವುದು. |
| 23. | BESCOM ನಿರ್ದೇಶನದಂತೆ ತಾತ್ಕಾಲಿಕ ವಸತಿ ವಿನ್ಯಾಸದಲ್ಲಿನ ವಿದ್ಯುತ್ ಕಾಮಗಾರಿಗಳನ್ನು ಕೈಗೊಂಡು ಪೂರ್ಣಗೊಳಿಸಲು ಕ್ರಮ ಕೈಗೊಳ್ಳತಕ್ಕದ್ದು. |
| 24. | ಸದರಿ ವಸತಿ ವಿನ್ಯಾಸದಲ್ಲಿ ಪ್ರಾಧಿಕಾರದ ದಿನಾಂಕ.08/11/2010 ರ ಸುತ್ತೋಲೆಯಂತೆ ಒಟ್ಟು ವಸತಿ ನಿವೇಶನಗಳ ಶೇ.10 ರಷ್ಟು ವಸತಿ ನಿವೇಶನಗಳನ್ನು ಆರ್ಥಿಕ ಹಿಂದುಳಿದ ವರ್ಗದವರಿಗಾಗಿ (EWS) ಮತ್ತು ಕಡಿಮೆ ಆದಾಯ ವರ್ಗದವರಿಗಾಗಿ (LIG) ಕಾಯ್ದಿರಿಸಕ್ಕದ್ದು, ಆ ವರ್ಗದವರಿಗೆ ನಿವೇಶನವನ್ನು ಹಂಚಿಕೆ ಮಾಡತಕ್ಕದ್ದು. ಆರ್ಥಿಕ ದುರ್ಬಲ ವರ್ಗದವರಿಗಾಗಿ (EWS) ಕಾಯ್ದಿರಿಸಿದ ನಿವೇಶನಗಳನ್ನು ಒಂದುಗೂಡಿಸಿ ದೊಡ್ಡ ಅಳತೆಯ ನಿವೇಶನವನ್ನಾಗಿ ಸಮಾಮೇಲನಾ ಮಾಡಿದ್ದಲ್ಲಿ ಮೂಲ ಆಶಯ ವಿಫಲವಾಗುವುದರಿಂದ ಆರ್ಥಿಕವಾಗಿ ಹಿಂದುಳಿದ ವರ್ಗದವರಿಗಾಗಿ (EWS) ಕಾಯ್ದಿರಿಸಿದ ವಸತಿ ನಿವೇಶನಗಳನ್ನು ಸಮಾಮೇಲನಾ ಮಾಡತಕ್ಕದ್ದಲ್ಲ. |
| 25. | BWSSB / KUWSDB/RWS, BESCOM ಇಲಾಖೆಗಳಿಂದ ಹಾಗೂ ಅಗತ್ಯಕ್ಕನುಗುಣವಾಗಿ KSPCB ರವರಿಂದ ಹಾಗೂ ಇತರೆ ಸಂಬಂಧಿತ ಇಲಾಖೆಗಳಿಂದ ಕಾಮಗಾರಿ ಮುಕ್ತಾಯ ಪ್ರಮಾಣ ಪತ್ರಗಳನ್ನು ಪಡೆದು ಪ್ರಾಧಿಕಾರಕ್ಕೆ ಸಲ್ಲಿಸುವುದು. |
| 26. | ಬಡಾವಣೆ ನಕ್ಷೆಯಲ್ಲಿ Transformer Yard, RWH, STP, OHT, SWM ಗಳಿಗಾಗಿ ಸೂಕ್ತ ಜಾಗಗಳನ್ನು ಕಾಯ್ದಿರಿಸಿದ್ದು ಇವುಗಳನ್ನು ಬದಲಾಯಿಸುವಂತಿಲ್ಲ ಹಾಗೂ ಸಂಬಂಧಪಟ್ಟ ಸಂಸ್ಥೆಯ ಅಭಿಪ್ರಾಯದಂತೆ ಅಭಿವೃದ್ಧಿಪಡಿಸುವುದು. |
| 27. | ಸದರಿ ಅನುಮೋದನೆಯಂತೆ ವಿನ್ಯಾಸದಲ್ಲಿನ ಎಲ್ಲಾ ಕಾಮಗಾರಿಗಳನ್ನು ಈ ಅನುಮೋದನೆಯ ದಿನಾಂಕದಿಂದ 3 ವರ್ಷಗಳ ಒಳಗಾಗಿ ಪೂರ್ಣಗೊಳಿಸಿ, ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಕುರಿತು ಸಕ್ಷಮ ಪ್ರಾಧಿಕಾರಗಳಿಂದ ದೃಢೀಕರಣ ಪತ್ರಗಳನ್ನು ಪಡೆದು ಸಲ್ಲಿಸಿ, ಅಂತಿಮ ಅನುಮೋದನೆ ಪಡೆಯತಕ್ಕದ್ದು. ಇಲ್ಲವಾದಲ್ಲಿ ಅವಧಿ ಮುಕ್ತಾಯ ಪೂರ್ವದಲ್ಲಿ ಸಕಾರಣಗಳೊಂದಿಗೆ ಮನವಿ ಸಲ್ಲಿಸಿ, ಅವಧಿ ವಿಸ್ತರಣೆಗೆ ಅನುಮತಿ ಪಡೆಯತಕ್ಕದ್ದು. |
| 28. | ಪ್ರಾಧಿಕಾರವು ಆಗಿಂದಾಗ್ಗೆ ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು. |

ಮೇಲ್ಕಂಡ ಷರತ್ತುಗಳೊಂದಿಗೆ ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕುಂಬಳಗೋಡು ಗ್ರಾಮದ ಸರ್ವೆ ನಂ. 79/2 ರಲ್ಲಿ 1ಎ-35ಗುಂ, ಸರ್ವೆ ನಂ. 79/3 ರಲ್ಲಿ 1ಎ-34ಗುಂ, ಸರ್ವೆ ನಂ. 79/4(P) ರಲ್ಲಿ 1ಎ-31.50ಗುಂ ಮತ್ತು ಸರ್ವೆ ನಂ. 79/5(P) ರಲ್ಲಿ 1ಎ-11.50ಗುಂ ಒಟ್ಟು 6ಎ-32ಗುಂಟೆ (ಒಟ್ಟು 0ಎ-23.25ಗುಂ

Housiey.com

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕುಂಬಳಗೋಡು ಗ್ರಾಮದ ಸರ್ವೆ ನಂ. 79/2, 79/3, 79/4(ಪಿ) ಮತ್ತು 79/5(ಪಿ) ರಲ್ಲಿ ಒಟ್ಟು 6ಎ-32ಗುಂಟೆ (ಒಟ್ಟು 0ಎ-23.25ಗುಂ ಖರಾಬು ಪಥ ಬದಲಾವಣೆಯ ನಂತರ ಹೊರತುಪಡಿಸಿ) ವಿಸ್ತೀರ್ಣದ ಜಮೀನುಗಳಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು ಅರ್ಜಿದಾರರಾದ **Sri. Shravan Gupta** ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

---

ಖರಾಬು ಪಥ ಬದಲಾವಣೆಯ ನಂತರ ಹೊರತುಪಡಿಸಿ) ವಿಸ್ತೀರ್ಣದ ಜಮೀನುಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17(2-A) ರ ಅಡಿಯಲ್ಲಿ 'Demarcation & Development' ಉದ್ದೇಶಕ್ಕೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲಾಗಿದೆ.

ಆಯುಕ್ತರು
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು.

ಇವರಿಗೆ,

Sri. Shravan Gupta
#10, 1st Cross, Gupta Layout,
South End Road, Bangalore.

Housiey.com